# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 165 |
| **ಸದಸ್ಯರ ಹೆಸರು :** | ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ :** | 12.09.2022 |
| **ಉತ್ತರಿಸುವ ಸಚಿವರು :** | ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರದಲ್ಲಿ ಸುಮಾರು 2 ಕೋಟಿ ರೂಪಾಯಿಯ ಅನುದಾನದಲ್ಲಿ 2020ನೇ ಸಾಲಿನಲ್ಲಿ ಶಿಷ್ಟಾಚಾರ ಉಲ್ಲಂಘಿಸಿ ಕನ್ನಡ ಭವನದ ಶಂಕುಸ್ಥಾಪನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. ದಿನಾಂಕ:22.11.2020 ರಂದು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಬೀದರ್ ನಗರದ ಕನ್ನಡ ಭವನ ಶಂಕುಸ್ಥಾಪನೆ ನೆರವೇರಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರನ್ನು ಆಹ್ವಾನಿಸದೇ ಇರುವ ಕುರಿತು ಶ್ರೀ ರಾಮಚಂದ್ರ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಮತ್ತು ಶ್ರೀ ಸಿದ್ರಾಮ ಶಿಂಧೆ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ವಿರುದ್ಧ ಮಾನ್ಯ ಸದಸ್ಯರು ಹಕ್ಕು ಚ್ಯುತಿ ಸೂಚನೆಯನ್ನು ನೀಡಿರುತ್ತಾರೆ. ಈ ಪ್ರಕರಣ ದಿನಾಂಕ:10.08.2022ರಂದು ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕು ಬಾಧ್ಯತಾ ಸಮಿತಿಯ ಮುಂದೆ ಚರ್ಚೆಗೆ ಬಂದಿರುತ್ತದೆ. |
| ಆ) | ಹಾಗಿದ್ದಲ್ಲಿ ಸುಮಾರು ಮೂರು ವರ್ಷಗಳು ಗತಿಸಿದ್ದರೂ, ಈ ಭವನ ಪೂರ್ಣವಾಗದಿರಲು ಕಾರಣವೇನು; ಭವನಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; | ಸರ್ಕಾರದ ಆದೇಶ ಸಂಖ್ಯೆ: ಕಸಂವಾ/94/ಕೆಓಎಲ್ ಆಕ/2019 ದಿನಾಂಕ:08.11.2019ರಲ್ಲಿ ಬೀದರ್ ನಗರದ ಚಿಕ್ಕಪೇಟೆ ಹತ್ತಿರ, ಬೀದರ್ ಜಿಲ್ಲಾಡಳಿತವು ಕನ್ನಡ ಭವನ ನಿರ್ಮಾಣಕ್ಕಾಗಿ ಒಂದು ಎಕರೆ ಭೂಮಿಯನ್ನು ಮಂಜೂರು ಮಾಡಿರುವುದರಿಂದ ಗಡಿ ಭಾಗದಲ್ಲಿ ಕನ್ನಡ ಭವನ ನಿರ್ಮಾಣ ಮಾಡಲು ರೂ.2.00 ಕೋಟಿಗೆ ಮಂಜೂರಾತಿ ನೀಡಿ, ಮೊದಲನೇ ಕಂತಿನ ಅನುದಾನ ರೂ1.00 ಕೋಟಿ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರಿಗೆ ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಇವರ ಮುಖಾಂತರ ಬಿಡುಗಡೆ ಮಾಡಲು ಆದೇಶಿಸಿದೆ. ಸರ್ಕಾರದ ಆದೇಶ ಸಂಖ್ಯೆ: ಕಸಂವಾ/111/ಕೆಓಎಲ್ ಆಕ/2020 ದಿನಾಂಕ:14.10.2020ರಲ್ಲಿ ಕಾಮಗಾರಿಯ ಅಂದಾಜು ಪಟ್ಟಿ ರೂ.2.00 ಕೋಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.<br><br>ಅದರನ್ವಯ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಸಂಖ್ಯೆ:ಕಗಪ್ರಪ್ರಾ/27/ಅನುದಾನ/2019-20, ದಿನಾಂಕ:09.01.2020 ರ ಪ್ರಾಧಿಕಾರದ ಕಛೇರಿ ಆದೇಶದ ಮೂಲಕ ರೂ.2.00 ಕೋಟಿಗಳನ್ನು ಮಂಜೂರು ಮಾಡಿ, ಮೊದಲನೇ ಕಂತಿನಲ್ಲಿ ರೂ.1.00ಕೋಟಿಯನ್ನು ಜಿಲ್ಲಾಧಿಕಾರಿಗಳು ಬೀದರ್, ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಕಸಂವಾ/110/ಕೆಓಎಲ್ ಆಕ/2021 ದಿನಾಂಕ:22.02.2022ರಲ್ಲಿ ಸದರಿ ಕಾಮಗಾರಿಗೆ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡಲು ಆದೇಶಿಸಲಾಗಿದೆ. |

| | | |
|---|---|---|
| | | 2020-21 ರಿಂದ 2022-23ನೇ ಸಾಲಿನವರೆಗೆ, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಕಡಿಮೆ ಅನುದಾನ ಹಂಚಿಕೆಯಾದ ಕಾರಣ ಸದರಿ ಕಾಮಗಾರಿಗೆ ಪ್ರಾಧಿಕಾರದಿಂದ ಬಿಡುಗಡೆ ಮಾಡಬೇಕಾಗಿದ್ದ ಬಾಕಿ ಉಳಿದ ರೂ.1.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ, ಬಾಕಿ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳುವಂತೆ ಮತ್ತು ನಂತರದಲ್ಲಿ ಬಾಕಿ ಇರುವ ಅನುದಾನವನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಬೀದರ್ ಜಿಲ್ಲೆಗೆ ಹಂಚಿಕೆಯಾದ ಅನುದಾನದಲ್ಲಿ ಸದರಿ ಅನುದಾನವನ್ನು ಬಿಡುಗಡೆ ಮಾಡಲು ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರನ್ನು ಕೋರಿರುವ ಬಗ್ಗೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ತಿಳಿಸಿರುತ್ತದೆ.<br><br>ನಂತರದಲ್ಲಿ, ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರು ಬಾಕಿ ಅನುದಾನ ಬಿಡುಗಡೆ ಮಾಡುವಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರನ್ನು ಕೋರಿದ್ದು, ಎರಡನೇ ಕಂತಿನ ಅನುದಾನ ಬಿಡುಗಡೆ ಕುರಿತು ಪರಿಶೀಲಿಸಲಾಗುತ್ತಿದೆ. |
| ಇ) | ಈ ಭವನದ ಕಾಮಗಾರಿ ವಿಳಂಬವಾಗಲು ಕಾರಣವೇನು; | ಕೋವಿಡ್-19ರ ಪ್ರಯುಕ್ತ ವಿಳಂಬವಾಗಿದ್ದು, ಎರಡನೇ ಕಂತಿನ ಅನುದಾನ ಬಿಡುಗಡೆಯಾದ ನಂತರ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. |
| ಈ) | ಯಾವ ಕಾಲಮಿತಿಯೊಳಗೆ ಸದರಿ ಭವನ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು; ಉಳಿದ ಬಾಕಿ ಹಣವನ್ನು ಬಿಡುಗಡೆ ಮಾಡುವುದು ಯಾವಾಗ? | |

ಸಂಖ್ಯೆ:ಕಸಂವಾ/378/ಕಸಧ/2022

(ವಿ.ಸುನಿಲ್ ಕುಮಾರ್)
ಇಂಧನ ಹಾಗು ಕನ್ನಡ ಮತ್ತು ಸಂಸ್ಕೃತಿ ಸಚಿವರು